All India Radio: Bangalore
National Bulletin In Kannada
03.11.2025  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

- ಮಹಿಳಾ ಏಕದಿನ ಕ್ರಿಕೆಟ್ : ಭಾರತದ ವನಿತೆಯರ ಮುಕುಟಕ್ಕೆ ಚೊಚ್ಚಲ ವಿಶ್ವಕಪ್ ಕಿರೀಟ
- ಬಿಹಾರ ವಿಧಾನಸಭಾ ಚುನಾವಣೆ : ಎನ್‌ಡಿಎ, ಮಹಾಘಟಬಂಧನ್ ಮೈತ್ರಿಕೂಟದ ನಾಯಕರಿಂದ ವಿವಿಧೆಡೆ ಇಂದು ಪ್ರಚಾರ ರ್‍ಯಾಲಿ
- ನವದೆಹಲಿಯಲ್ಲಿಂದು ಉದಯೋನ್ಮುಖ ವಿಜ್ಞಾನ, ತಂತ್ರಜ್ಞಾನ ನಾವೀನ್ಯತಾ ಸಮಾವೇಶ ಉದ್ಘಾಟಿಸಲಿರುವ ಪ್ರಧಾನಿ ನರೇಂದ್ರ ಮೋದಿ
- ರಾಷ್ಟ್ರವ್ಯಾಪಿ ಡಿಜಿಟಲ್ ಲೈಫ್ ಸರ್ಟಿಫಿಕೆಟ್ ಅಭಿಯಾನ ೪.೦ ಗೆ ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಚಾಲನೆ

<><><><>

ನವಿ ಮುಂಬೈನ ಡಾ.ಡಿ.ವೈ.ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ನಡೆದ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್‌ನ ಫೈನಲ್ ಪಂದ್ಯದಲ್ಲಿ ನಿನ್ನೆ ಭಾರತದ ವನಿತೆಯರ ತಂಡ, ದಕ್ಷಿಣ ಆಫ್ರಿಕಾ ವಿರುದ್ಧ ೫೨ ರನ್‌ಗಳ ಭರ್ಜರಿ ಜಯ ದಾಖಲಿಸಿದೆ. ಆ ಮೂಲಕ ಚೊಚ್ಚಲ ಐಸಿಸಿ ಟ್ರೋಫಿಗೆ ಮುತ್ತಿಕ್ಕಿದೆ. ಮೊದಲಿಗೆ ಟಾಸ್ ಗೆದ್ದ ದಕ್ಷಿಣ ಆಫ್ರಿಕಾ ಫೀಲ್ಡಿಂಗ್ ಆಯ್ದುಕೊಂಡಿತು. ಮೊದಲು ಬ್ಯಾಟ್ ಮಾಡಿದ ಭಾರತ ತಂಡ, ಶೆಫಾಲಿ ವರ್ಮ ಅವರ ೮೭, ದೀಪ್ತಿ ಶರ್ಮಾ ೫೮ ಮತ್ತು ಸ್ಮೃತಿ ಮಂಧಾನ ಸಿಡಿಸಿದ ೪೫ ರನ್‌ಗಳ ನೆರವಿನಿಂದ ನಿಗದಿತ ೫೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೯೮ ರನ್ ಗಳಿಸಿತು. ೨೯೯ ರನ್‌ಗಳ ಗುರಿ ಬೆನ್ನತ್ತಿದ ದಕ್ಷಿಣ ಆಫ್ರಿಕಾ, ೧೦೧ ರನ್ ಗಳಿಸಿದ ಲಾರಾ ವೊಲ್‌ವಾರ್ಟ್ ಅವರ ಹೋರಾಟದ ನಡುವೆಯೂ, ಬೌಲಿಂಗ್ ಮತ್ತು ಫೀಲ್ಡಿಂಗ್‌ನಲ್ಲಿ ಭಾರತದ ವನಿತೆಯರು ತೋರಿದ ಅದ್ಭುತ ಪ್ರದರ್ಶನದಿಂದ ೪೫.೩ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೨೪೬ ರನ್ ಗಳಿಸಲಷ್ಟೇ ಶಕ್ತವಾಯಿತು.

ಪಂದ್ಯದಲ್ಲಿ ಉತ್ತಮ ಬ್ಯಾಟಿಂಗ್ ಪ್ರದರ್ಶನ ತೋರಿದ್ದಕ್ಕಾಗಿ ಶೆಫಾಲಿ ವರ್ಮಾಗೆ ಪಂದ್ಯಶ್ರೇಷ್ಠ ಆಟಗಾರ್ತಿ ಪ್ರಶಸ್ತಿ ಪಡೆದರು. ಇನ್ನು ದೀಪ್ತಿ ಶರ್ಮಾ ಸರಣಿಯುದ್ದಕ್ಕೂ ತೋರಿದ ಅತ್ಯುತ್ತಮ ಪ್ರದರ್ಶನಕ್ಕಾಗಿ ಸರಣಿಶ್ರೇಷ್ಠ ಆಟಗಾರ್ತಿ ಪ್ರಶಸ್ತಿಗೆ ಭಾಜನರಾದರು. ಹಲವು ವರ್ಷಗಳ ಕಾಯುವಿಕೆಯ ನಂತರ ಭಾರತದ ವನಿತೆಯರ ತಂಡಕ್ಕೆ ಚೊಚ್ಚಲ ಐಸಿಸಿ ಪ್ರಶಸ್ತಿ ಲಭಿಸಿದೆ. ಈ ಹಿಂದೆ, ಮಹಿಳಾ ತಂಡ ೨೦೦೫ ಹಾಗೂ ೨೦೧೭ರಲ್ಲಿ ಏಕದಿನ ವಿಶ್ವಕಪ್ ಫನಲ್ ಹಾಗೂ ೨೦೨೦ರಲ್ಲಿ ಟಿ-೨೦ ವಿಶ್ವಕಪ್ ಫೈನಲ್ ತಲುಪಿದ್ದರೂ ಟ್ರೋಫಿಯಿಂದ ವಂಚಿತವಾಗಿತ್ತು. ಗೆಲುವಿನ ಕುರಿತು ತಂಡದ ನಾಯಕಿ ಹರ್ಮನ್ ಪ್ರೀತ್ ಸಂತಸ ಹಂಚಿಕೊಂಡಿದ್ದಾರೆ.

ಧ್ವನಿ : ಹರ್ಮನ್ ಪ್ರೀತ್ (೧೭ ಸೆಕೆಂಡ್‌ಗಳು)

<><><><>

ಐಸಿಸಿ ಮಹಿಳಾ ಕ್ರಿಕೆಟ್ ವಿಶ್ವಕಪ್ ೨೦೨೫ ರ ಫೈನಲ್‌ನಲ್ಲಿ ಅದ್ಭುತ ಗೆಲುವು ಸಾಧಿಸಿದ್ದಕ್ಕಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ತಂಡವನ್ನು ಅಭಿನಂದಿಸಿದ್ದಾರೆ. ಈ ಮಹತ್ವದ ಕ್ಷಣ, ಮಹಿಳಾ ಕ್ರಿಕೆಟ್ ಅನ್ನು ಇನ್ನೂ ಹೆಚ್ಚಿನ ಎತ್ತರಕ್ಕೆ ಕೊಂಡೊಯ್ಯುತ್ತದೆ. ಆಟಗಾರ್ತಿಯರ ದೃಢನಿಶ್ಚಯ ಮತ್ತು ಸ್ಫೂರ್ತಿದಾಯಕ ಪ್ರದರ್ಶನಕ್ಕಾಗಿ ಅವರನ್ನು ಶ್ಲಾಘಿಸಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಹುಡುಗಿಯರು ಭಾರತವನ್ನು ಹೆಮ್ಮೆಪಡುವಂತೆ ಮಾಡಿದ್ದಾರೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ಹೇಳಿದ್ದಾರೆ. ಭವಿಷ್ಯದ ಚಾಂಪಿಯನ್‌ಗಳು ಕ್ರೀಡಾ ಕ್ಷೇತ್ರವನ್ನು ಆಯ್ಕೆ ಮಾಡಿಕೊಳ್ಳಲು ಪ್ರೇರೇಪಿಸುವ ಅದ್ಭುತ ಗೆಲುವು ಎಂದು ಬಣ್ಣಿಸಿರುವ ಅವರು, ಅಂತಿಮ ಪಂದ್ಯದಲ್ಲಿ ಅವರ ಪ್ರದರ್ಶನ ಉತ್ತಮ ಕೌಶಲ್ಯ ಮತ್ತು ಆತ್ಮವಿಶ್ವಾಸದಿಂದ ಗುರುತಿಸಲ್ಪಟ್ಟಿದೆ. ಪಂದ್ಯಾವಳಿಯಾದ್ಯಂತ ತಂಡ, ಅಸಾಧಾರಣ ಪ್ರದರ್ಶನ ಮತ್ತು ದೃಢತೆಯನ್ನು ಸಾಬೀತುಪಡಿಸಿದೆ ಎಂದು ಪ್ರಧಾನಿ ನರೇಂದ್ರ ಹೇಳಿದರು. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಕೂಡ ತಂಡಕ್ಕೆ ಶುಭ ಹಾರೈಸಿದರು. ಮಹಿಳಾ ಕ್ರಿಕೆಟಿಗರು ದೇಶಾದ್ಯಂತ ಹೃದಯಗಳನ್ನು ಗೆದ್ದಿದ್ದಾರೆ ಎಂದು ಹೇಳಿದರು. ಕೇಂದ್ರ ಗೃಹ ಸಚಿವ ಅಮಿತ್ ಶಾ ಕೂಡ ವನಿತಾ ತಂಡವನ್ನು ಅಭಿನಂದಿಸಿದರು. ಇದು ರಾಷ್ಟ್ರಕ್ಕೆ ಗೌರವದ ಕ್ಷಣ. ಟೀಮ್ ಇಂಡಿಯಾ ಭಾರತದ ಹೆಮ್ಮೆಯನ್ನು ಆಕಾಶಕ್ಕೆ ಏರಿಸಿದೆ ಎಂದು ಅವರು ಹೇಳಿದರು.

<><><><>

ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದ ಪ್ರಚಾರ ನಾಳೆ  ಮುಕ್ತಾಯಗೊಳ್ಳಲಿದೆ. ಎನ್‌ಡಿಎ ಮತ್ತು ಮಹಾಘಟಬಂಧನ್ ಮೈತ್ರಿಕೂಟದ ಹಿರಿಯ ನಾಯಕರು ತಮ್ಮ ಮೈತ್ರಿಕೂಟದ ಅಭ್ಯರ್ಥಿಗಳ ಪರವಾಗಿ ಬಿರುಸಿನ ಮತ ಪ್ರಚಾರದಲ್ಲಿ ತೊಡಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನಿನ್ನೆ ಸಂಜೆ ರಾಜಧಾನಿ ಪಾಟ್ನಾದಲ್ಲಿ ದಿನಕರ್ ಗೋಲಂಬರ್‌ನಿಂದ ಐತಿಹಾಸಿಕ ಗಾಂಧಿ ಮೈದಾನದವರೆಗೆ ಬೃಹತ್ ರೋಡ್ ಶೋ ನಡೆಸಿದರು. ೧.೫ ಕಿ.ಮೀ.ಗೂ ಹೆಚ್ಚು ಉದ್ದದ ರೋಡ್ ಶೋನಲ್ಲಿ ಜನರು, ವಿಶೇಷವಾಗಿ ಮಹಿಳೆಯರು ಮತ್ತು ಎನ್‌ಡಿಎ ಕಾರ್ಯಕರ್ತರು ಪ್ರಧಾನಿಯನ್ನು ಸ್ವಾಗತಿಸಿದರು. ಈ ವೇಳೆ ಪ್ರಧಾನಿ ಮೋದಿ ಅವರು, ಎನ್‌ಡಿಎ ಅಭ್ಯರ್ಥಿಗಳ ಪರವಾಗಿ ಮತಯಾಚಿಸಿದರು. ಇಂದು ಪ್ರಧಾನಿ ನರೇಂದ್ರ ಮೋದಿ ಅವರು, ಉತ್ತರ ಬಿಹಾರ ಜಿಲ್ಲೆಗಳಾದ ಸಹರ್ಸಾ ಮತ್ತು ಕತಿಹಾರ್‌ನಲ್ಲಿ ರ‍್ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ಶಿಯೋಹರ್, ಸೀತಾಮರ್ಹಿ ಮತ್ತು ಮಧುಬನಿಯಲ್ಲಿ ಮೂರು ಚುನಾವಣಾ ಸಭೆಗಳಲ್ಲಿ ಭಾಗವಹಿಸಲಿದ್ದಾರೆ. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ವಾದ್ರಾ ಅವರು ಸಹರ್ಸಾ ಮತ್ತು ಲಖಿಸರೈನಲ್ಲಿ ಮಹಾಘಟಬಂಧನ್ ಮೈತ್ರಿಕೂಟದ ಅಭ್ಯರ್ಥಿಗಳ ಪರವಾಗಿ ಮತ ಪ್ರಚಾರ ನಡೆಸಲಿದ್ದಾರೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರು ವೈಶಾಲಿ ಜಿಲ್ಲೆಯಲ್ಲಿ ಚುನಾವಣಾ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಉತ್ತರ ಪ್ರದೇಶ ಯೋಗಿ ಆದಿತ್ಯನಾಥ್ ಕೂಡ ದರ್ಭಾಂಗ, ಮುಜಫರ್‌ಪುರ, ಸರನ್ ಮತ್ತು ಪಾಟ್ನಾದಲ್ಲಿ ನಾಲ್ಕು ರ‍್ಯಾಲಿಗಳಲ್ಲಿ ಭಾಗವಹಿಸಲಿದ್ದಾರೆ.

<><><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಎರಡು ದಿನಗಳ ಕೇರಳ ಭೇಟಿಗಾಗಿ ಇಂದು ತಿರುವನಂತಪುರಕ್ಕೆ ಆಗಮಿಸಲಿದ್ದಾರೆ. ಅಧಿಕಾರ ವಹಿಸಿಕೊಂಡ ನಂತರ ರಾಜ್ಯಕ್ಕೆ ಇದು ಅವರ ಮೊದಲ ಭೇಟಿಯಾಗಿದೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ತಿರುವನಂತಪುರಕ್ಕೆ ಆಗಮಿಸಿ, ಫಾತಿಮಾ ಮಾತಾ ರಾಷ್ಟ್ರೀಯ ಕಾಲೇಜಿನ ವಜ್ರಮಹೋತ್ಸವ ಆಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲು ಕೊಲ್ಲಂಗೆ ತೆರಳಲಿದ್ದಾರೆ.

ತಮ್ಮ ಭೇಟಿಯ ಸಮಯದಲ್ಲಿ, ಉಪರಾಷ್ಟ್ರಪತಿ, ಕೊಲ್ಲಂನಲ್ಲಿರುವ ಭಾರತೀಯ ತೆಂಗಿನಕಾಯಿ ರಫ್ತುದಾರರ ಸಂಘಗಳ ಒಕ್ಕೂಟದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ. ಮಂಗಳವಾರ, ಅವರು ತಿರುವನಂತಪುರಂನಲ್ಲಿರುವ ಶ್ರೀ ಚಿತ್ರ ತಿರುನಾಳ್ ವೈದ್ಯಕೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆಗೆ ಭೇಟಿ ನೀಡಲಿದ್ದಾರೆ.

<><><>

ಇಂದಿನಿಂದ ನವೆಂಬರ್ ೫ರವರೆಗೆ ನವದೆಹಲಿಯ ಭಾರತ್ ಮಂಟಪಂನಲ್ಲಿ ಆಯೋಜಿಸಲಾಗಿರುವ ಉದಯೋನ್ಮುಖ ವಿಜ್ಞಾನ ಮತ್ತು ತಂತ್ರಜ್ಞಾನ ನಾವೀನ್ಯತಾ ಸಮಾವೇಶ-ಎಸ್ಟಿಕ್ ೨೦೨೫ ಅನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಉದ್ಘಾಟಿಸಲಿದ್ದಾರೆ.  ಈ ಸಂದರ್ಭದಲ್ಲಿ ಪ್ರಧಾನಿ, ದೇಶದಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿ ಪರಿಸರ ವ್ಯವಸ್ಥೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ೧ ಲಕ್ಷ ಕೋಟಿ ರೂಪಾಯಿ ಮೊತ್ತದ ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತಾ ಯೋಜನಾ ನಿಧಿಗೆ ಚಾಲನೆ ನೀಡಲಿದ್ದಾರೆ.  ಈ ಮೂರು ದಿನಗಳ ಸಮಾವೇಶ ಶೈಕ್ಷಣಿಕ, ಸಂಶೋಧನಾ ಸಂಸ್ಥೆಗಳು, ಉದ್ಯಮಗಳು ಮತ್ತು ಸರ್ಕಾರದ ಮೂರು ಸಾವಿರಕ್ಕೂ ಅಧಿಕ ಪ್ರತಿನಿಧಿಗಳನ್ನು ಒಟ್ಟುಗೂಡಿಸಲಿದೆ. ಕಾರ್ಯಕ್ರಮದ ಭಾಗವಾಗಿ ಚರ್ಚೆಗಳು ವಿಚಾರ ಸಂಕೀರ್ಣಗಳು, ಪ್ರಾತ್ಯಕ್ಷಿಕೆಗಳು ಮತ್ತು ತಂತ್ರಜ್ಞಾನ ಪ್ರದರ್ಶನಗಳು ನಡೆಯಲಿದ್ದು, ಸಂಶೋಧಕರು ಮತ್ತು ಉದ್ಯಮಿ ಹಾಗೂ ಯುವ ನಾವೀನ್ಯಕಾರರ ನಡುವೆ ಸಹಕಾರವನ್ನು ಬೆಳೆಸಿ ಭಾರತದ ವಿಜ್ಞಾನ ಮತ್ತು ತಂತ್ರಜ್ಞಾನ ಪರಿಸರ ವ್ಯವಸ್ಥೆಯನ್ನು ಬಲಪಡಿಸಲು ಒಂದು ವೇದಿಕೆ ಒದಗಿಸುತ್ತದೆ.

<><><>

ರಾಷ್ಟ್ರವ್ಯಾಪಿ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಅಭಿಯಾನ ೪.೦ ಅಡಿಯಲ್ಲಿ ನವದೆಹಲಿಯಲ್ಲಿ ನಡೆಯಲಿರುವ ಎಸ್‌ಬಿಐ ಬೃಹತ್ ಶಿಬಿರದಲ್ಲಿ ಇಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಭಾಗವಹಿಸಲಿದ್ದಾರೆ. ಈ ಅಭಿಯಾನ ೨ ಸಾವಿರಕ್ಕೂ ಹೆಚ್ಚು ನಗರಗಳು ಮತ್ತು ಪಟ್ಟಣಗಳಲ್ಲಿ ಎರಡು ಕೋಟಿ ಪಿಂಚಣಿದಾರರನ್ನು ಸ್ಯಾಚುರೇಶನ್ ಆಧಾರಿತ ಸಂಪರ್ಕ ವಿಧಾನದ ಮೂಲಕ ತಲುಪುವ ಗುರಿಯನ್ನು ಹೊಂದಿದೆ ಎಂದು ಸಿಬ್ಬಂದಿ, ಸಾರ್ವಜನಿಕ ಕುಂದು-ಕೊರತೆಗಳು ಮತ್ತು ಪಿಂಚಣಿ ಸಚಿವಾಲಯ ತಿಳಿಸಿದೆ. ಆಧಾರ್ ಆಧಾರಿತ ಮುಖ ದೃಢೀಕರಣ ತಂತ್ರಜ್ಞಾನದ ಬಳಕೆಯನ್ನು ಈ ಅಭಿಯಾನ ಒತ್ತಿಹೇಳುತ್ತದೆ.

ಇದರಿಂದಾಗಿ ಪಿಂಚಣಿದಾರರು ಬಯೋಮೆಟ್ರಿಕ್ ಸಾಧನಗಳ ಅಗತ್ಯವಿಲ್ಲದೆ, ತಮ್ಮ ಜೀವ ಪ್ರಮಾಣಪತ್ರಗಳನ್ನು ಅನುಕೂಲಕರವಾಗಿ ಸಲ್ಲಿಸಲು ಸಾಧ್ಯವಾಗುತ್ತದೆ ಎಂದು ಸಚಿವಾಲಯ ಹೇಳಿದೆ. ಪಿಂಚಣಿದಾರರ ಡಿಜಿಟಲ್ ಸೇರ್ಪಡೆಯನ್ನು ಸಾಧಿಸಲು ಸಹಯೋಗದೊಂದಿಗೆ ಕೆಲಸ ಮಾಡಲು ಬ್ಯಾಂಕುಗಳು, ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್, ಯುಐಡಿಎಐ, ಎಂಇಐಟಿವೈ, ಎನ್ಐಸಿ, ರೈಲ್ವೆ ಮತ್ತು ಪಿಂಚಣಿದಾರರ ಕಲ್ಯಾಣ ಸಂಘಗಳು ಸೇರಿದಂತೆ ಎಲ್ಲಾ ಪ್ರಮುಖ ಪಾಲುದಾರರು ಈ ಅಭಿಯಾನದಲ್ಲಿ ಭಾಗವಹಿಸಲಿದ್ದಾರೆ.

<><><><>

ಶ್ರೀಹರಿಕೋಟಾದಿಂದ ಭಾರತದ ಅತ್ಯಂತ ಭಾರವಾದ ಸಂವಹನ ಉಪಗ್ರಹ ಸಿಎಂಎಸ್-೦೩ ಅನ್ನು ಇಸ್ರೋ ನಿನ್ನೆ ಸಂಜೆ ಉಡಾವಣೆ ಮಾಡಿತು. ಭಾರತೀಯ ಉಡಾವಣಾ ವಾಹನವು ಹೊತ್ತೊಯ್ದು ಜಿಯೋಸಿಂಕ್ರೋನಸ್ ಟ್ರಾನ್ಸ್‌ಫರ್ ಆರ್ಬಿಟ್‌ಗೆ ಹೆವಿಲಿಫ್ಟ್ ರಾಕೆಟ್ ಅನ್ನು ನಿನ್ನೆ ಸಂಜೆ ೫.೨೬ ಕ್ಕೆ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಉಡಾವಣೆ ಮಾಡಲಾಯಿತು. ನೌಕಾ ಸಂವಹನವನ್ನು ಹೆಚ್ಚಿಸುವುದು ಮತ್ತು ದೂರದ ಪ್ರದೇಶಗಳಲ್ಲಿ ಡಿಜಿಟಲ್ ಸಂಪರ್ಕವನ್ನು ಹೆಚ್ಚಿಸುವುದು ಈ ಕಾರ್ಯಾಚರಣೆಯ ಗುರಿಯಾಗಿದೆ.

<><><><>

ಸಂಸ್ಕೃತಿ ಸಚಿವಾಲಯದ ಸಹಯೋಗದೊಂದಿಗೆ ಪ್ರಸಾರ ಭಾರತಿ ವತಿಯಿಂದ ಇದೇ ೨೯ ರವರೆಗೆ ೬೭ನೇ ಆವೃತ್ತಿಯ ಆಕಾಶವಾಣಿ ಸಂಗೀತ ಸಮ್ಮೇಳನವನ್ನು ಆಯೋಜಿಸಲಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>